ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 20-07-2017

# ಪತ್ರಿಕಾ ಆಮಂತ್ರಣ

## 1.ಕಲಾ ವಿಮರ್ಶೆ ಕಮ್ಮಟ:

**ಕಲಾ ವಿಮರ್ಶೆ ಸ್ವರೂಪ ನೆಲೆಗಳು:**

ಓ.ಎಲ್. ನಾಗಭೂಷಣ ಸ್ವಾಮಿ, ಕಮ್ಮಟದ ನಿರ್ದೇಶಕರು, ಹಿರಿಯ ಸಾಹಿತಿಗಳು, ಬೆಂಗಳೂರು.

**ಚಿತ್ರಕಲೆ ವಿಮರ್ಶೆ:**

ಡಾ. ಶ್ರೀಧರ್ ಮೂರ್ತಿ, ಕಲಾ ಪ್ರಾಧ್ಯಾಪಕರು, ಕರ್ನಾಟಕ ಚಿತ್ರಕಲಾ ಪರಿಷತ್, ಬೆಂಗಳೂರು.

ಅಧ್ಯಕ್ಷತೆ:

ಡಾ. ಎಂ.ಎಸ್. ಮೂರ್ತಿ, ಅಧ್ಯಕ್ಷರು, ಕಾರ್ನಾಟಕ ಲಲಿತಕಲಾ ಅಕಾಡೆಮಿ, ಬೆಂಗಳೂರು.

ದಿನಾಂಕ: 21-07-2017 ಶುಕ್ರವಾರ, ಸಮಯ: ಬೆಳಿಗ್ಗೆ 10.30 ರಂದ 1.15 ಗಂಟೆವರೆಗೆ

ಸ್ಥಳ: ವರ್ಣ ಆರ್ಟ್ ಗ್ಯಾಲರಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಜುಲೈ 21 ರಿಂ ದ 23 ರವರೆಗೆ ಜಿಕೆವಿಕೆಯಲ್ಲಿ ಬಿ.ಆರ್. ಅಂಬೇಡ್ಕರ್ ಅಂತಾರಾಷ್ಟ್ರೀಯ ಸಮಾವೇಶ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಜುಲೈ 21 ರಿಂದ 23 ರವರೆಗೆ ನಗರದ ಜಿ.ಕೆ.ವಿ.ಕೆ.ಯಲ್ಲಿ ಹಮ್ಮಿಕೊಂಡಿರುವ ಸಂವಿಧಾನ ಶಿಲ್ಪಿ ಡಾ: ಬಿ.ಆರ್. ಅಂಬೇಡ್ಕರ್ ಅವರ ಸಮಾವೇಶವನ್ನು ಮಾನವ ಹಕ್ಕುಗಳ ಹೋರಾಟಗಾರ ಮಾರ್ಟಿನ್ ಲೂಥರ್ ಕಿಂಗ್ –3 ಅವರು ಉದ್ಘಾಟಿಸಲಿದ್ದು ಎ.ಐ.ಸಿ.ಸಿ. ಉಪಾಧ್ಯಕ್ಷ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಚಿವರುಗಳು ಭಾಗವಹಿಸಲಿದ್ದಾರೆ ಎಂದು ಲೋಕೋಪಯೋಗಿ ಸಚಿವರು ಹೆಚ್.ಸಿ. ಮಹದೇವಪ್ಪ ಅವರು ತಿಳಿಸಿದರು.

ಇಂದು ಅವರು ಜಿ.ಕೆ.ವಿ.ಕೆ. ಆವರಣದಲ್ಲಿ ಸಮ್ಮೇಳನದ ಪೂರ್ವಭಾವಿ ಕಾರ್ಯಗಳನ್ನು ವೀಕ್ಷಿಸಿ ವಿಶೇಷವಾಗಿ ಹಮ್ಮಿಕೊಂಡಿರುವ ವಸ್ತುಪ್ರದರ್ಶನ ಮಳಿಗೆಯನ್ನು ಉದ್ಘಾಟಿಸಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು ಈ ಮೂರು ದಿನಗಳ ಸಮಾವೇಶದಲ್ಲಿ 125 ಕ್ಕೂ ಹೆಚ್ಚು ಜನ ಸಂಪನ್ಮೂಲ ವ್ಯಕ್ತಿಗಳು, 300 ಕ್ಕೂ ಹೆಚ್ಚು ಭಾಷಣಕಾರರು, ವಿಷಯ ತಜ್ಞರು, ಮಾನವ ಹಕ್ಕುಗಳ ಹೋರಾಟಗಾರರು, ವಿಷಯ ಮಂಡನೆ ಮಾಡಲಿದ್ದಾರೆ.

ಜುಲೈ 22 ಹಾಗೂ 23 ರಂದು ಬೆಳಿಗ್ಗೆ 9–00 ರಿಂದ ಸಂಜೆ ವರೆಗೆ 12 ಕೇಂದ್ರಗಳಲ್ಲಿ 300 ಕ್ಕೂ ಹೆಚ್ಚು ವಿಷಯ ತಜ್ಞರು ನಿರಂತರ ವಿಷಯ ಮಂಡನೆ ಮಾಡಲಿದ್ದಾರೆ.

ನಾಳಿನ ಕಾರ್ಯಕ್ರಮದಲ್ಲಿ ಸುಮಾರು 2500 ಜನ ಭಾಗವಹಿಸುವ ನಿರೀಕ್ಷೆಯಿದ್ದು, ಹೆಚ್ಚಿನ ಜನ ವೀಕ್ಷಿಸಲು ಅನುವಾಗುವಂತೆ ಎಲ್ಇಡಿ ಪರದೆ ಮೂಲಕ ಸಹ ಕಾರ್ಯಕ್ರಮ ಭಿತ್ತರ ಮಾಡಲಾಗುತ್ತಿದೆ. ಹೊರಗಡೆ 8 ರಿಂದ 10 ಸಾವಿರ ಜನ ಸೇರುವ ನಿರೀಕ್ಷೆಯಿದೆ. ಎಲ್ಲರಿಗೂ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ.

ಸಮ್ಮೇಳನದಲ್ಲಿ ಮಂಡನೆಯಾಗುವ ವಿಷಯಗಳನ್ನು ನಂತರ ಪುಸ್ತಕದ ರೂಪದಲ್ಲಿ ಹೊರತರಲು ಯೋಜಿಸಲಾಗಿದೆ. ಕಾರ್ಯಕ್ರಮ ಹೆಚ್ಚಿನ ಜನರನ್ನು ತಲುಪುವ ನಿಟ್ಟಿನಲ್ಲಿ ವಿಶೇಷವಾಗಿ ವಿದ್ಯಾರ್ಥಿಗಳಿಗೆ ತಲುಪಲೆಂದು ರಾಜ್ಯದ ಆಯ್ದ 13 ವಿಶ್ವವಿದ್ಯಾನಿಲಯಗಳಲ್ಲಿ ನೇರ ಪ್ರಸಾರದ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿದರು.

ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ಮಾತನಾಡಿ ಈ ರೀತಿಯ ಸಮಾವೇಶ ನಡೆಯುತ್ತಿರುವುದು ದೇಶದಲ್ಲಿಯೇ ಪ್ರಥಮ ಬಸವಣ್ಣನವರು ಹುಟ್ಟಿದ ನಾಡಿನಲ್ಲಿ ಸಮಾನತೆಯ ಹಂಬಲವಿದೆ. ಮಾನ್ಯ ಮುಖ್ಯಮಂತ್ರಿಗಳ ಮಾರ್ಗದರ್ಶನದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಡಾ: ಬಿ.ಆರ್. ಅಂಬೇಡ್ಕರ್ ಕುರಿತು ವಿಶೇಷ ಛಾಯಾಚಿತ್ರಗಳ ವಿನೂತನ ಪ್ರದರ್ಶನ ಮಳಿಗೆಯನ್ನು ಉದ್ಘಾಟಿಸಲಾಯಿತು.

ಪತ್ರಿಕಾಗೋಷ್ಠಿಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕ ಎನ್.ಆರ್. ವಿಶುಕುಮಾರ್, ಸಮಾಜ ಕಲ್ಯಾಣ ಇಲಾಖೆಯ ವಿಶೇಷ ಅಧಿಕಾರಿ ವೆಂಕಟಯ್ಯ ಅವರು ಉಪಸ್ಥಿತರಿದ್ದರು.

## ಡಿಪ್ಲೋಮಾ ಸಿನಿಮಾಟೋಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಅಂಡ್ ಇಂಜಿನಿಯರಿಂಗ್ ಕೋರ್ಸ್‌ಗಳ ಪ್ರವೇಶ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆಯ ವತಿಯಿಂದ ಪ್ರಸಕ್ತ 2017–18 ನೇ ಸಾಲಿಗೆ ಡಿಪ್ಲೋಮಾ ಸಿನಿಮಾಟೋಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಮತ್ತು ಇಂಜಿನಿಯರಿಂಗ್ ಕೋರ್ಸ್‌ಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಿದೆ.

ಪ್ರವೇಶ ಬಯಸುವ ವಿದ್ಯಾರ್ಥಿಗಳು ದಿನಾಂಕ: 17–07–2017 ರಿಂದ 22–07–2017 ರವರೆಗೆ ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕೃತ ವೆಬ್‌ಸೈಟ್‌ಗಳಾದ www.dte.kar.nic.in ಮತ್ತು www.kea.kar.nic.in ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಅರ್ಜಿ ನೋಂದಣಿ ಶುಲ್ಕ ರೂ 100/– ( GM/2A/2B/3A/3B ವರ್ಗದ ಅಭ್ಯರ್ಥಿಗಳಿಗೆ) ಮತ್ತು ರೂ 50/–(SC/ST/CAT-1 ವರ್ಗದ ಅಭ್ಯರ್ಥಿಗಳಿಗೆ) ಗಳನ್ನು ಕರ್ನಾಟಕ ರಾಜ್ಯದ ಯಾವುದೇ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಗಳಲ್ಲಿ ಖಾತೆ ಹೆಸರು ED-KEA-DCET-2017 & A/c No. 36843662415 (IFSC Code SBI0007080) ರಲ್ಲಿ ಪಾವತಿಸಿ ಬ್ಯಾಂಕ್ ಚಲನ್‌ನ ಪ್ರತಿಯನ್ನು 122 ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ "ಆನ್‌ಲೈನ್ ಅರ್ಜಿಗಳ ಭರ್ತಿ/ದಾಖಲೆಗಳ ಪರಿಶೀಲನಾ ಕೇಂದ್ರ" ಗಳಲ್ಲಿ ದಾಖಲೆಗಳ ಪರಿಶೀಲನೆ ಮಾಡಿಸಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ದೂರವಾಣಿ : 080 28466768 ಮತ್ತು 28446672 ಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ನವೀಕರಣಗೊಂಡ ಕಂಠೀರವ ಒಳಾಂಗಣ ಕ್ರೀಡಾಂಗಣ

# – ಮುಖ್ಯಮಂತ್ರಿಗಳಿಂದ ವೀಕ್ಷಣೆ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ಬೆಂಗಳೂರಿನ ಕಂಠೀರವ ಒಳಾಂಗಣ ಕ್ರೀಡಾಂಗಣವನ್ನು 9.7 ಕೋಟಿ ರೂ. ಗಳ ವೆಚ್ಚದಲ್ಲಿ ನವೀಕರಣಗೊಳಿಸಲಾಗಿದ್ದು, ಮುಖ್ಯ ಮಂತ್ರಿ ಸಿದ್ಧರಾಮಯ್ಯ ಅವರು ಇಂದು ಕ್ರೀಡಾಂಗಣವನ್ನು ಪರಿವೀಕ್ಷಿಸಿದರು. ಬಾಸ್ಕೇಟ್ ಬಾಲ್ ಎಸೆಯುವ ಮೂಲಕ ಮುಖ್ಯಮಂತ್ರಿಯವರು ಪರಿವೀಕ್ಷಣೆಗೆ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಕ್ರೀಡಾ ಸಚಿವ ಪ್ರಮೋದ್ ಮಧ್ವರಾಜ್ ಅವರು ಮಾತನಾಡಿ, ಕ್ರೀಡಾಂಗಣದ ಸುವ್ಯವಸ್ಥೆಗೆ ಪ್ರಥಮಾದ್ಯತೆ ನೀಡಲಾಗುವುದು. ದುಸ್ಥಿತಿಯಲ್ಲಿದ್ದ ಕ್ರೀಡಾಂಗಣವನ್ನು ಇಲಾಖೆಯಿಂದ 5.00 ಕೋಟಿ ರೂ, ಬಿ.ಬಿ.ಎಂ.ಪಿ. ಇಂದ 3.5 ಕೋಟಿ ರೂ, ಬಿ.ಡಿ.ಎ ಯಿಂದ ಮರದ ನೆಲಹಾಸಿಗಾಗಿ 1.2 ಕೋಟಿಗಳು, ಒಟ್ಟು 9.7 ಕೋಟಿ ರೂ. ಗಳ ವೆಚ್ಚದಲ್ಲಿ ನವೀಕರಣಗೊಳಿಸುವ ಮೂಲಕ ಅಂತರಾಷ್ಟ್ರೀಯ ಮಟ್ಟಕ್ಕೆ ಏರಿಸಲಾಗಿದೆ ಎಂದರು.

ಮುಂದಿನ ದಿನಗಳಲ್ಲಿ ಹೊರಾಂಗಣ ಕ್ರೀಡಾಂಗಣವನ್ನು ಸುಮಾರು 6.00 ಕೋಟಿ ವೆಚ್ಚದಲ್ಲಿ ಸಿಂಥೆಟಿಕ್ ಹೊದಿಕೆಗಳನ್ನು ಬದಲಿಸುವ ಮೂಲಕ ಇತರ ನವೀಕರಣ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುವುದು. ಇದಕ್ಕೆ ಇಲಾಖೆಯಲ್ಲಿ ಹಣ ಲಭ್ಯವಿದೆ ಎಂದು ತಿಳಿಸಿದರು.

ಕ್ರೀಡಾಪಟುಗಳಿಗೆ ಬೇಕಾದ ವ್ಯವಸ್ಥೆಗಳು, ತಾಂತ್ರಿಕ ಸೌಲಭ್ಯಗಳು, ಕೋಚ್‌ಗಳಿಗೆ ಬೇಕಾದ ವ್ಯವಸ್ಥೆಗಳು, ಮಾಧ್ಯಮದವರಿಗೆ ಬೇಕಾಗುವ ಅನುಕೂಲಗಳನ್ನು ಕಲ್ಪಿಸಲಾಗಿದೆ. ಮರದ ನೆಲಹಾಸು, ಆಸನಗಳ ವ್ಯವಸ್ಥೆ, ಕೊಠಡಿಗಳ ನವೀಕರಣ, ಶೌಚಾಲಯ ಸುವ್ಯವಸ್ಥೆ ಹೀಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ನವೀಕರಿಸಲಾಗಿದೆ.

ಇತರ ಕಾರ್ಯಕ್ರಮಗಳಿಗೆ ಕ್ರೀಡಾಂಗಣವನ್ನು ನೀಡುವಾಗ ಸುಪ್ರೀಂ ಕೋರ್ಟ್‌ನ ಆದೇಶ ಪಡೆದೆ ನೀಡಲಾಗುವುದು. ಇದರಿಂದ ಕ್ರೀಡಾಂಗಣದ ನಿರ್ವಹಣೆಗೆ ಆರ್ಥಿಕವಾಗಿ ನೆರವಾಗುವುದು ಎಂದರು.

ಅಂತರರಾಷ್ಟ್ರೀಯ ಮಹಿಳಾ ಬಾಸ್ಕೇಟ್ ಬಾಲ್ ಇದೇ ತಿಂಗಳ 23 ರಿಂದ ಪ್ರಾರಂಭವಾಗಲಿದ್ದು, ಏಷ್ಯ, ಆಸ್ಟ್ರೇಲಿಯಾ, ನ್ಯೂಜಿಲ್ಯಾಂಡ್ ಸೇರಿದಂತೆ ಒಟ್ಟು 16 ದೇಶಗಳು ಭಾಗವಹಿಸಲಿವೆ ಎಂದರು.

ಇದೇ ಸಂದರ್ಭದಲ್ಲಿ ಹಾಜರಿದ್ದ ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಜಾರ್ಜ್ ಅವರು ಮಾಧ್ಯಮದವರು ಮೆಟ್ರೋನಲ್ಲಿ ಹಿಂದಿ ಭಾಷೆ ಬಳಕೆ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ, ಕರ್ನಾಟಕದಲ್ಲಿ ಕನ್ನಡಕ್ಕೆ ಪ್ರಥಮಾದ್ಯತೆ ನೀಡಲಾಗುವುದು. ಆದರೆ ಕಾನೂನನ್ನು ಕೈಗೆ ತೆಗೆದುಕೊಳ್ಳುವ ಯಾವುದೇ ಕೆಲಸ ಮಾಡಬಾರದು ಎಂದು ಮನವಿ ಮಾಡಿದರು.

ಎಸ್‌ಎಂ:ಪಿ.ಎಸ್.ಐ.

# ನೆಲದ ಸಿರಿ ಮಾಲಿಕೆ ಸಾಕ್ಷ್ಯಚಿತ್ರ

ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ಮಿಸಿರುವ ನೆಲದ ಸಿರಿ ಮಾಲಿಕೆಯಡಿ ಸಾಕ್ಷ್ಯಚಿತ್ರಗಳು ಜುಲೈ 20 ರಿಂದ 25ರವರೆಗೆ ಪ್ರತಿದಿನ ಸಂಜೆ 6:00 ರಿಂದ 6:15 ಗಂಟೆಯ ಅವಧಿಯಲ್ಲಿ ದೂರದರ್ಶನ, ಬೆಂಗಳೂರು ಕೇಂದ್ರದಿಂದ ಪ್ರಸಾರ ಮಾಡಲಾಗುವುದು.

ದಿನಾಂಕ: 20-07-2017, ಗುರುವಾರ, ಸೋಲಾರ್ ವಿದ್ಯುತ್, ಸರಳ ಒಲೆ, ಚಿಂಗಾರ ವನ್ಯ ಜೀವಿಧಾಮ & ಎಲ್.ಪಿ.ಜಿ. ಸಿಲಿಂಡರ್ ವಿತರಣೆ, ದಿನಾಂಕ: 21-07-2017, ಶುಕ್ರವಾರ. ಚೆನ್ನಪಟ್ಟಣ ತಾಲೋಕಿನ ಕೆರೆಗಳಿಗೆ ನೀರು ತುಂಬಿಸುವ ಮತ್ತು ಹೊಸ ಕೆರೆಗಳ ನಿರ್ಮಾಣ. ದಿನಾಂಕ: 24-07-2017, ಸೋಮವಾರ, ನೆಫ್ರೋ ಯುರಾಲಜಿ ಸಂಸ್ಥೆ, ಬೆಂಗಳೂರು, ದಿನಾಂಕ: 25-07-2017, ಆಲಮಟ್ಟಿ ಉದ್ಯಾನವನ, ಬೆಳಗಾವಿ. ಮೇಲ್ಕಂಡ ವಿಷಯಗಳ ಕುರಿತು ಸಾಕ್ಷ್ಯಚಿತ್ರಗಳನ್ನು ಪ್ರಸಾರ ಮಾಡಲಾಗುವುದು.

## ಅಂತಿಮ ಆಯ್ಕೆ ಪಟ್ಟಿ ಪ್ರಕಟ

**ಬೆಂಗಳೂರು, ಜುಲೈ 20 (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಸೇವಾ ಆಯೋಗದಿಂದ ಅಧಿಸೂಚನೆ 03-03-2016 ರಲ್ಲಿ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ನಿಲಯ ಮೇಲ್ವಿಚಾರಕರು (ಪುರುಷ) -175 (106+69 ಹೈ.ಕ) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ದಿ: 20-7-2017 ರಂದು ಆಯೋಗದ ವೆಬ್‌ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.**